ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 05/08/2020

# ವೆಂಟಿಲೇಟರ್ ಅಳವಡಿಕೆಗೆ ತಾಕೀತು

ಸಂ.ಕ.ಸಮಾಚಾರ ಬೆಂಗಳೂರು 5/8/20

ರಾಜ್ಯದಲ್ಲಿ ವೆಂಟಿಲೇಟರ್‌ಗಳ ಸಂಖ್ಯೆಯನ್ನು 335ಕ್ಕೆ ಹೆಚ್ಚಿಸಲಾಗಿದ್ದು ಈ ಎಲ್ಲ ವೆಂಟಿಲೇಟರ್‌ಗಳನ್ನು ಕೂಡಲೇ ಅಳವಡಿಸುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ ವೆಂಟಿಲೇಟರ್ ಬೆಡ್‌ಗಳನ್ನು ಹೆಚ್ಚಿಸುವ ಸಂಬಂಧ ಅಧಿಕಾರಿಗಳೊಂದಿಗೆ ದೂರವಾಣಿ ಮುಖಾಂತರ ಸಭೆ ನಡೆಸಿದ ಅವರು, ಭಾರತ ಸರ್ಕಾರದ ಪಿಎಂ ಕೇರ್ಸ್ ಅಡಿಯಲ್ಲಿ ರಾಜ್ಯಕ್ಕೆ 681 ವೆಂಟಿಲೇಟರ್‌ಗಳು ದೊರಕಿವೆ.

ಕಳೆದ ವಾರ ಬೆಂಗಳೂರಿನಲ್ಲಿ 166 ಸೇರಿದಂತೆ ರಾಜ್ಯದಲ್ಲಿ ಈ ಬೆಡ್‌ಗಳ ಸಂಖ್ಯೆ 335ಕ್ಕೆ ಹೆಚ್ಚಿಸಲಾಗಿದೆ. ಈ ವಾರದ ಅಂತ್ಯದಲ್ಲಿ ಉಳಿದ 346 ವೆಂಟಿಲೇಟರ್‌ಗಳನ್ನು ಅಳವಡಿಸಲಾಗುವುದು ಎಂದರು.

ಇನ್ನು ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಿರುವ 1279 ವೆಂಟಿಲೇಟರ್‌ಗಳು ಈ ತಿಂಗಳ ಅಂತ್ಯದಲ್ಲಿ ದೊರಕಲಿವೆ. ಕೂಡಲೇ ಎಲ್ಲ ವೆಂಟಿಲೇಟರ್‌ಗಳನ್ನು ಅಳವಡಿಸಬೇಕು. ಆಸ್ಪತ್ರೆಯ ಸಿಬ್ಬಂದಿ ಇವುಗಳನ್ನು ಬಳಸಬೇಕೆಂದು ಹೇಳಿದರು.


ಆಸ್ಪತ್ರೆಯಲ್ಲೂ ಕಡತಗಳ ಪರಿಶೀಲನೆ.

ಸಿಬ್ಬಂದಿ ಕೊರತೆ ಕಾಣುತ್ತಿರುವುದರಿಂದ ಪ್ಯಾರಾ ಮೆಡಿಕಲ್ ಸಿಬ್ಬಂದಿಯನ್ನು ತಕ್ಷಣವೇ ನೇಮಕ ಮಾಡಿಕೊಳ್ಳಬೇಕು ಹಾಗೂ ವೆಂಟಿಲೇಟರ್‌ಗಳನ್ನು ಒದಗಿಸಲು ಬೆಂಗಳೂರಿನ ಖಾಸಗಿ ಆಸ್ಪತ್ರೆಗಳು ಮಾಡಿರುವ ಮನವಿಯನ್ನು ಪರಿಗಣಿಸಬೇಕು. ಕೊರೊನಾ ಸಂಬಂಧ ತಾತ್ಕಾಲಿಕವಾಗಿ ಒದಗಿಸಲು ಷರತ್ತು ಮತ್ತು ನಿಯಮಗಳ ಬಗ್ಗೆ ತೀರ್ಮಾನಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಹಂತ ಹಂತವಾಗಿ ವೆಂಟಿಲೇಟರ್ ಬೆಡ್‌ಗಳ ಸಂಖ್ಯೆ ಹೆಚ್ಚಿಸಲಾಗುವುದು. ಯಾರೂ ಆತಂಕಕ್ಕೆ ಒಳಗಾಗಬಾರದು. ಈ ನಿಟ್ಟಿನಲ್ಲಿ ಸರ್ಕಾರ ಎಲ್ಲ ರೀತಿಯ ಪ್ರಯತ್ನ ಮಾಡುತ್ತಿದೆ ಎನ್ನುವುದನ್ನು ಜನರಿಗೆ ಮನವರಿಕೆ ಮಾಡಿಕೊಡುವಲ್ಲಿ ಅಧಿಕಾರಿಗಳು ಮುಂದಾಗಬೇಕೆಂದರು.